**ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ**
**ಜೇವರ್ಗಿ**

**ಸಿಸಿ ನಂ.296/2018**

**ಚಾಸಾ-2/ಪಿಡಬ್ಲೂ-2**

| | |
|---|---|
| **ಹೆಸರು** | ನಿಂಗಣ್ಣ |
| **ತಂದೆ ಹೆಸರು** | ರಾಮಚಂದ್ರ |
| **ವಯಸ್ಸು** | 45 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಕೂಟನೂರ |

**ದಿನಾಂಕ 23.07.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭೀಯೋಜಕರಿಂದಃ**

ಚಾಸಾ-3 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ಈಗಾಗಲೇ ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 5-6 ವರ್ಷಗಳ ಹಿಂದೆ ಕೂಟನೂರ ಗ್ರಾಮದಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಪೊಲೀಸರು ಪಡೆದುಕೊಂಡರು ಎಂದರೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಏನನ್ನು ವಶ ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯುನ್ನ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 02.04.2017 ರಂದು ಮುಂಜಾನೆ 6.15 ರಿಂದ 7.15 ರ ಸಮಯದಲ್ಲಿ ಅಂಕಲಗಾ ಗ್ರಾಮದ ಕೆಇಬಿ ಮುಂದೆ ಇರುವ ರಾಜಬಕ್ಷ ದರ್ಗಾದ ಬಯಲು ಜಾಗದಲ್ಲಿ ಆರೋಪಿತರು ಅಕ್ರಮವಾಗಿ ಮರಳು ಕಳ್ಳತನದಿಂದ ಸಂಗ್ರಹ ಮಾಡಿದ್ದಾಗ ಪೊಲೀಸರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ದಾಳಿ ಮಾಡಿ ಟ್ರಾಕ್ಟರನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಹಾಜರಿದ್ದು ನಿಪಿ-1ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ